# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 164, ವಿದ್ಯಾಪೀಠ ಬೆಂಗಳೂರು.

ಸಂಖ್ಯೆ: ಸ.ಅ/ವಾ–164//2022–23 ದಿನಾಂಕ: 24–05–2022

## ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020–21, ದಿನಾಂಕ: 21–09–2020ರ ಆದೇಶದಂತೆ ದಿನಾಂಕ: 21–05–2022 ಶನಿವಾರ ವಾರ್ಡ್ ಸಂಖ್ಯೆ: 164, ವಿದ್ಯಾಪೀಠದ ವಾರ್ಡ್ ಕಛೇರಿಯಲ್ಲಿ ನಡೆದ ಮೇ ತಿಂಗಳ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಸ್ಥಳ : ಬಿಬಿಎಂಪಿ ವಾರ್ಡ್ ಕಛೇರಿ, ವಿದ್ಯಾಪೀಠ ಸರ್ಕಲ್ ಹತ್ತಿರ

ಸಮಯ : ಬೆಳಿಗ್ಗೆ 10.30 ಗಂಟೆಗೆ

**ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ವಿಜಯ್‌ಕುಮಾರ್ | ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು |
| 2 | ಶ್ರೀ ರಾಜೇಶ್ ಕೆ.ಎನ್ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಿರಿನಗರ ಉಪವಿಭಾಗ |
| 3 | ಶ್ರೀ ಎಂ. ರಮೇಶ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್–164, ವಿದ್ಯಾಪೀಠ |
| 4 | ಶ್ರೀ ಸುದರ್ಶನ್ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 5 | ಡಾ॥ ಪುಷ್ಪಿತ | ವೈದ್ಯಾಧಿಕಾರಿ (ಸಿ.ಟಿ ಬೆಡ್ ಆರೋಗ್ಯ ಕೇಂದ್ರ) |
| 6 | ಶ್ರೀ ವಿಷಕಂಠಯ್ಯ ಹೆಚ್.ಎನ್ | ಕೆಲಸ ಪರಿವೀಕ್ಷಕರು, ವಾರ್ಡ್–164, ವಿದ್ಯಾಪೀಠ |
| 7 | ಶ್ರೀ ಸುನಿಲ್ ಕುಮಾರ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 164 |
| 8 | ಶ್ರೀ ಎಂ. ಸುರೇಶ್ | ಕಂದಾಯ ಪರಿವೀಕ್ಷರು, ವಾರ್ಡ್ ನಂ. 164 |
| 9 | ಶ್ರೀ ಸುನಿಲ್ | ಹಿರಿಯ ಆರೋಗ್ಯ ಪರಿವೀಕ್ಷಕರು (ಬಸವನಗುಡಿ ವಲಯ) |
| 10 | ಶ್ರೀ ಸುದರ್ಶನ್ ಡಿ.ಎನ್ | ಸಹಾಯಕ ಅಭಿಯಂತರರು, ಬೆಸ್ಕಾಂ |
| 11 | ಶ್ರೀ ಧವಳೇಶ್ ಬಿ | ಸಹಾಯಕ ಅಭಿಯಂತರರು, ಬೆಸ್ಕಾಂ |
| 12 | ಶ್ರೀ ಸುದರ್ಶನ್ | ಸಹಾಯಕ ಅಭಿಯಂತರರು, ಬಿ.ಡಬ್ಲು,ಎಸ್.ಎಸ್.ಬಿ |
| 13 | ಶ್ರೀಮತಿ ಕುಮುದ ಹೆಚ್ | ಕಿರಿಯ ಅಭಿಯಂತರು, ಬಿ.ಡಬ್ಲು,ಎಸ್.ಎಸ್.ಬಿ |
| 14 | ಶ್ರೀ ಯೋಗೀಶ್ | ಸೂಪರ್‌ವೈಸರ್ |
| 15 | ಶ್ರೀ ಕುಮಾರ್ | ಸಾರ್ವಜನಿಕರು |
| 16 | ಶ್ರೀ ಶಿವಲಿಂಗಯ್ಯ ವೈ ಎಸ್ | ಪತ್ರಕರ್ತರು |
| 17 | ಶ್ರೀ ಜಯರಾಮೇ ಗೌಡ | ಸ್ಯಾನಿಟರಿ ಧಫೇದಾರ್ |
| 18 | ಶ್ರೀ ರಾಧಕೃಷ್ಣ | ವಾರ್ಡ್ ಘ.ತ್ಯಾನಿ ಸೂಪರ್‌ವೈಸರ್ |
| 19 | ಶ್ರೀ ದುರ್ಗಪ್ರಸಾದ್ | ವಾರ್ಡ್ ಘ.ತ್ಯಾನಿ ಸೂಪರ್‌ವೈಸರ್ |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ಆರ್. ವಿಜಯ್‌ಕುಮಾರ್ ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಮತ್ತು ಸದಸ್ಯರಿಗೆ ಸ್ವಾಗತ ಕೋರುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು. ಸಭೆಯಲ್ಲಿ ಹಿಂದಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ವಾರ್ಡ್ ವ್ಯಾಪ್ತಿಯಲ್ಲಿ ದಿನಾಂಕ 09–05–2022ರಿಂದ 18–05–2022ರ ವರೆಗೆ ಭಾರಿ ಮಳೆಯಾಗಿದ್ದು, ಅಕಾಲಿಕ ಮಳೆಯಿಂದ ವಾರ್ಡ್ ವ್ಯಾಪ್ತಿಯ 3ನೇ ಕ್ರಾಸ್, ಚೆನ್ನಮ್ಮನಕೆರೆ ಅಚ್ಚುಕಟ್ಟು ಮತ್ತು 5ನೇ ಅಡ್ಡರಸ್ತೆಯಲ್ಲಿ ಹಾಗೂ ಹಲವು ಕಡೆಗಳಲ್ಲಿ ಮರಗಳ ರೆಂಬೆಕೊಂಬೆಗಳು ಬಿದ್ದಿದ್ದು, ಅವುಗಳನ್ನು ತಕ್ಷಣ ತೆರವುಗೊಳಿಸಿ ಸಂಚಾರಕ್ಕೆ ಅನುವು ಮಾಡಲಾಗಿರುತ್ತದೆ ಮತ್ತು ಒಳಚರಂಡಿ ಮಂಡಳಿಯ ಮ್ಯಾನ್‌ಹೋಲ್‌ಗಳಿಂದ ನೀರು ಚಿಮ್ಮಿದ್ದು, ತಗ್ಗು ಪ್ರದೇಶದಲ್ಲಿದ್ದ ಕೆಲವು ಮನೆಗಳಿಗೆ ನೀರು ನುಗ್ಗಿದ್ದು ನಂತರ ತೆರವುಗೊಳಿಸಲಾಗಿದೆ ಎಂದು ಕಾಮಗಾರಿ ವಿಭಾಗದ ಕೆಲಸ ಪರಿವೀಕ್ಷಕರು ಸಭೆಗೆ ತಿಳಿಸಿರುತ್ತಾರೆ.

2. ವಾರ್ಡ್ ವ್ಯಾಪ್ತಿಯಲ್ಲಿನ ಹಳೆಯ ಟ್ರಾನ್ಸ್‌ಫಾರಂನ್ನು ಸ್ಥಳಾಂತರಿಸಲಾಗಿದೆ. ಹಾಗೂ ಹೋಲಿ ಚೈಲ್ಡ್ ಕಾನ್ವೆಂಟ್ ಶಾಲೆಯ ಮುಂಭಾಗದಲ್ಲಿ ಬೆಂಗಳೂರು ನೀರು ಮತ್ತು ಒಳಚರಂಡಿ ಮಂಡಳಿ ಮ್ಯಾನ್‌ಹೋಲ್ ತುಂಬಿ ಹರಿಯುತ್ತಿದ್ದು, ಅದನ್ನು ಕೂಡಲೇ ದುರಸ್ಥಿಗೊಳಿಸಬೇಕೆಂದು ಹಾಗೂ ಅನಧೀಕೃತವಾಗಿ ಎಲ್ಲೆಂದರಲ್ಲೆ ರಸ್ತೆ ಅಗೆತ ಮಾಡಿದ್ದಲ್ಲಿ ತಮ್ಮನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಎಫ್.ಐ.ಆರ್ ದಾಖಲಿಸಲಾಗುವುದು ಎಂದು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಹಾಜರಾಗಿದ್ದ ಶ್ರೀ ಸುದರ್ಶನ್, ಸಹಾಯಕ ಅಭಿಯಂತರರು ರವರಿಗೆ ಸಭೆಯಲ್ಲಿ ಅಧ್ಯಕ್ಷರು ಸೂಚಿಸಿರುತ್ತಾರೆ. ಕಾಲಕಾಲಕ್ಕೆ ವಾರ್ಡಿನ ಕಾಮಗಾರಿ ಇಲಾಖೆಯೊಂದಿಗೆ ಸಂಪರ್ಕದಲ್ಲಿದ್ದು ರಸ್ತೆ ಅಗೆತ ಕಾಮಗಾರಿಗಳ ವಿವರಗಳನ್ನು ವಾರ್ಡ್ ಇಂಜಿನಿಯರ್‌ರವರಿಗೆ ಆದಷ್ಟು ಮುಂಚಿತವಾಗಿ ತಿಳಿಸಿ ಕಾಮಗಾರಿ ಕೈಗೊಳ್ಳಲು ಮತ್ತು ಪೂರ್ಣಗೊಂಡ ನಂತರ ಜಂಟಿ ತಪಾಸಣೆ ಕೈಗೊಳ್ಳಲು ನೋಡಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿರುತ್ತಾರೆ.

3. ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಭಿಯಂತರರಿಗೆ ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಅಗೆತಕ್ಕೆ ಅನುಮತಿ ಕೋರಿ ಲಿಖಿತವಾಗಿ ಅರ್ಜಿ ನೀಡಬೇಕೆಂದು, ಅನುಮತಿಯನ್ನು ಪಡೆದ ನಂತರ ರಸ್ತೆ ಅಗೆಯಬೇಕಾಗಿದ್ದು, ಅಗೆತದ ನಂತರ ಅಗೆದ ರಸ್ತೆ ಭಾಗಗಳನ್ನು ಪುನರ್‌ನಿರ್ಮಾಣ ಮಾಡಿಕೊಡಲು ಸದರಿಯವರಿಗೆ ಸೂಚಿಸಿರುತ್ತಾರೆ ಹಾಗೂ ಅನಧಿಕೃತವಾಗಿ ರಸ್ತೆ ಅಗೆತ ಮಾಡಿದ್ದಲ್ಲಿ ತಮ್ಮನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಎಫ್.ಐ.ಆರ್ ದಾಖಲಿಸಲಾಗುವುದು ಮತ್ತು ವಿದ್ಯುತ್ ಕೇಬಲ್‌ಗಳಿಗೆ ಅಡ್ಡ ಬರುವ ಮರದ ರೆಂಬೆ ಕೊಂಬೆಗಳನ್ನು ಕಡಿದು ಅದನ್ನು ವಿಲೇವಾರಿ ಮಾಡದೇ ಇರುವುದನ್ನು ಗಮನಿಸಿ ತಮ್ಮ ಬೆಸ್ಕಾಂ ವತಿಯಿಂದ ವಿಲೇವಾರಿ ಮಾಡಲು, ವಿದ್ಯುತ್ ಅವಘಡಗಳು ನಡೆಯದಂತೆ ಕ್ರಮ ವಹಿಸುವಂತೆ ಸಭೆಯಲ್ಲಿ ಅಧ್ಯಕ್ಷರು ಸೂಚಿಸಿರುತ್ತಾರೆ..

4. ಸಭೆಯಲ್ಲಿ ಹಾಜರಿದ್ದ ಶ್ರೀ ಸುನಿಲ್ ರವರಿಗೆ ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಪೌರಕಾರ್ಮಿಕರ ಹಾಜರಾತಿ ಮತ್ತು ಆಟೋ ಚಾಲಕರ ಹಾಜರಾತಿಯನ್ನು ಮುಂದಿನ ವಾರ್ಡ್ ಕಮಿಟಿ ಸಭೆಯಲ್ಲಿ ವಿವರನ್ನು ಸಲ್ಲಿಸುವಂತೆ ತಿಳಿಸಿರುತ್ತಾರೆ ಹಾಗೂ ರಸ್ತೆಗಳಲ್ಲಿ ಪೌರಕಾರ್ಮಿಕರು ಕಸದ ಗುಡ್ಡೆಗಳನ್ನು ಶೇಖರಿಸುತ್ತಿದ್ದು ಅವುಗಳನ್ನು ತಕ್ಷಣ ಅಟೋ ಟಿಪ್ಪರ್‌ಗಳ ಮೂಲಕ ದಿನನಿತ್ಯ ವಿಲೇವಾರಿ ಮಾಡಲು, ಮಳೆಗಾಲದ ಪ್ರಯುಕ್ತ ತೋಳುಚರಂಡಿಗಳನ್ನು ಸ್ವಚ್ಛಗೊಳಿಸಿ ನೀರು ಸರಾಗವಾಗಿ ಅವುಗಳ ಮುಖಾಂತರ ಚರಂಡಿ ಸೇರುವಂತೆ ಮಾಡುವುದು ಹಾಗೂ ಆಟೋ ಟಿಪ್ಪರ್‌ಗಳ ದಾಖಲಾತಿಗಳಾದ ಫಿಟ್‌ನೆಸ್ ಮತ್ತು ಡಿ.ಎಲ್ ಹಾಗೂ ಇನ್ನಿತರ

ದಾಖಲಾತಿಗಳನ್ನು ಆಗಿಂದಾಗ್ಗೆ ಪರಿಶೀಲಿಸಲು ಸೂಚಿಸಿರುತ್ತಾರೆ. ಹಾಗೂ ಆಟೋ ಟಿಪ್ಪರ್‌ಗಳಿಗೆ ಜಿ.ಪಿ.ಎಸ್ ಅಳವಡಿಸಿರುವ ಬಗ್ಗೆ ದಾಖಲೆಯನ್ನು ಮುಂದಿನ ಸಭೆಯಲ್ಲಿ ಸಲ್ಲಿಸಲು ಅಧ್ಯಕ್ಷರು ಸೂಚಿಸಿರುತ್ತಾರೆ.

5. ವಾರ್ಡ್ ವ್ಯಾಪ್ತಿಯಲ್ಲಿ ಹಲವು ಪಾರ್ಕ್‌ಗಳು ಇದ್ದು, ಉದ್ಯಾನವನದ ಸ್ವಚ್ಛತೆಯ ಬಗ್ಗೆ ವಿಹಾರಿಗಳಿಂದ ಹಲವಾರು ದೂರುಗಳು ಬರುತ್ತಿದ್ದು, ಉದ್ಯಾನವನಕ್ಕೆ ಸಂಬಂಧಪಟ್ಟ ಶ್ರೀಮತಿ ಭೂದೇವಿ, ತೋಟಗಾರಿಗೆ ಪರಿವೀಕ್ಷಕರು ರವರು ಸಭೆಗೆ ಹಾಜರಾಗದೇ ಇರುವ ಬಗ್ಗೆ ನೋಡಲ್ ಅಧಿಕಾರಿಯವರು ಅಸಮಾಧಾನ ವ್ಯಕ್ತಪಡಿಸಿದ್ದು, ಕಾರಣ ಕೇಳಿ ನೋಟಿಸ್ ನೀಡಲು ಸೂಚಿಸಿರುತ್ತಾರೆ ಹಾಗೂ ಮುಂದಿನ ಸಭೆಗೆ ಸೂಕ್ತ ಮಾಹಿತಿಯೊಂದಿಗೆ ಹಾಜರಾಗಲು ಸಭೆಯಲ್ಲಿ ಅಧ್ಯಕ್ಷರು ಸೂಚಿಸಿರುತ್ತಾರೆ.

6. ವಾರ್ಡ್ ವ್ಯಾಪ್ತಿಯಲ್ಲಿ 5300 ಆಸ್ತಿಗಳಿದ್ದು, ಮೇ 2022ರ ಅಂತ್ಯದವರೆಗೂ 5% ಆಸ್ತಿ ತೆರಿಗೆ ರಿಯಾಯಿತಿ ಮುಂದುವರೆದಿದ್ದು ಸಾರ್ವಜನಿಕರು ಉಪಯೋಗಿಸಿಕೊಳ್ಳುವಂತೆ ಸೂಚಿಸಿದ್ದು ಸಭೆಗೆ ಕಂದಾಯ ಆಧಿಕಾರಿಗಳು ಆದ ಶ್ರೀ ಸುರೇಶ್ ರವರು 2022ನೇ ಸಾಲಿನಲ್ಲಿ ರೂ 500-00ಲಕ್ಷ ಬೇಡಿಕೆ ಇದ್ದು ಈ ದಿನದವರೆಗೂ ರೂ 340-00ಲಕ್ಷ ಕಂದಾಯ ವಸೂಲು ಆಗಿದ್ದು ಉಳಿದ ಬಾಕಿಯನ್ನು ಶೀಘ್ರವಾಗಿ ವಸೂಲು ಮಾಡುವುದಾಗಿ ಕಂದಾಯ ಅಧಿಕಾರಿಗಳು ಅಧ್ಯಕ್ಷರಿಗೆ ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಸಭೆಯಲ್ಲಿ ಚರ್ಚಿಸಿದ್ದು, ಈ ವಿಷಯಗಳ ಬಗ್ಗೆ ಮುಂದಿನ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ, ವಂದನೆಗಳೊಂದಿಗೆ ಈ ಸಭೆಯನ್ನು ಅಧ್ಯಕ್ಷರು ಮುಕ್ತಾಯಗೊಳಿಸಿದರು.

21/05/2022
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 164, ವಿದ್ಯಾಪೀಠ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ವಲಯ ಆಯುಕ್ತರು(ದಕ್ಷಿಣ) ಬೃ.ಬೆ.ಮ.ಪಾಲಿಕೆ, ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
7. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.